PRODUCED BY AN AUTODESK EDUCATIONAL PRODUCT



TYPICAL 1ST, 2ND, 3RD & 4TH FLOOR PLAN

LVL +3.35, +6.25, +9.15, +12.05M

NO OF UNITS-21X4=84



TERRACE FLOOR PLAN

LVL +14.95M

ಮಾನ್ಯ ಆಯುಕ್ತರವರ ಆದೇಶ ಸಂಖ್ಯೆ 3235 ದಿನಾಂಕ 23-10-2019 ರಂದು ಅನುಮೋದಿಸಿರುತ್ತಾರೆ.

ಚಲನ್ ನಂ. 6992 & 6993, ದಿನಾಂಕ: 11/11/2019.

ಅ ಕೋಡ್	ವಿವರಗಳು	ಪ್ರಸ್ತುತ ಪಾವತಿಸಿರುವ ಶುಲ್ಕ
182	ನಕ್ಷೆ ಪರಿಶೀಲನಾ ಶುಲ್ಕ	505575.00
191	ನೆಲ ಬಾಡಿಗೆ	505575.00
189	ಅಭಿವೃದ್ಧಿ ಶುಲ್ಕ	22470.00
537	ಕೊಳಚೆ ನಿರ್ಮೂಲನಾ ಶುಲ್ಕ	14772.00
546	ಕಾರ್ಮಿಕ ಕಲ್ಯಾಣ ನಿಧಿ	786000.00
493	ಭದ್ರತಾ ಠೇವಣಿ	561750.00
183	ನಕ್ಷೆ ಪ್ರತಿಗಳ ಶುಲ್ಕ	48000.00
199	ಕೆರೆ ಅಭಿವೃದ್ಧಿ ಶುಲ್ಕ	100000.00
	ಒಟ್ಟು ಮೊತ್ತ	2544142.00
	'ಸಿ' ಜಿ.ಎಸ್.ಟಿ. 9%	97345.80
	'ಎಸ್' ಜಿ.ಎಸ್.ಟಿ. 9%	97345.80
	ಪಾವತಿಸಬೇಕಿರುವ ಒಟ್ಟು ಮೊತ್ತ	2738834.00

ಪಾಲಿಸಬೇಕಾದ ಷರತ್ತುಗಳು

1) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.
2) ಬಂಡಿದಾರಿ / ರಾಜ ಕಾಲುವೆ / ಮಳೆ ನೀರು ಚರಂಡಿ ಇನ್ನೂ ಯಾವುದೇ ತರಹದ ಖರಾಬು ಜಮೀನು ಸದರಿ ಜಮೀನಿನ ವಿಸ್ತೀರ್ಣದಲ್ಲಿ ಇದ್ದಲ್ಲಿ ಆ ಪ್ರದೇಶವನ್ನು ಯಾವುದೇ ತರಹದ ನಿರ್ಮಾಣದ ಕಾರ್ಯವನ್ನು ಮಾಡುವಂತಿಲ್ಲ ಹಾಗೂ ಇತರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ ಮತ್ತು ಅಂತಹ ಪ್ರದೇಶಕ್ಕೆ ಸೂಕ್ತ ರಕ್ಷಣೆ ಒದಗಿಸುವುದು.
3) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು. ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಭಾಗದಲ್ಲಿ ಅಳವಡಿಸಿ ನಿರ್ವಹಿಸುವುದು.
4) ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಿಗೆ , ಬಿಡಿಎ/ಬಿಬಿಎಂಪಿ/ನಗರಸಭೆ/ಪಂಚಾಯತ್ ಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು
5) ಮಳೆ ನೀರು ಕೊಯ್ಲನ್ನು ಬೆಂಗಳೂರು ಜಲ ಮಂಡಳಿ ರವರು ನಿಗಧಿಪಡಿಸಿರುವಂತೆ ಕಡ್ಡಾಯವಾಗಿ ಅಳವಡಿಸುವುದು.
6) ಇಬ್ಬಗೆಯ ಕೊಳವೆ ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು.
7) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ , Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಪೂರ್ಣ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದ್ದಲ್ಲ.
8) ಅಭಿವೃದ್ಧಿದಾರರು ಕಟ್ಟಡದ ಆವರಣಗಳಲ್ಲಿ ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ಸಂರಕ್ಷಿಸುವ ಷರತ್ತಿಗೆ ಬದ್ಧರಾಗಿರತಕ್ಕದ್ದು.
9) ಅಭಿವೃದ್ಧಿದಾರರು ಕಟ್ಟಡಗಳಿಗೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.
10) ಅಭಿವೃದ್ಧಿದಾರರು ಟ್ರಾನ್ಸ್ ಫಾರ್ಮರ್ ಗಾಗಿ ಗುರುತಿಸಿರುವ ಪ್ರದೇಶದಲ್ಲಿ ಅಳವಡಿಸತಕ್ಕದ್ದು. ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದಲ್ಲ.
11) ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯ, ಕಟ್ಟಡದ ರಚನಾತ್ಮಕ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಾಬ್ದಾರರಾಗಿರತಕ್ಕದ್ದು. ಕಟ್ಟಡದ ರಚನಾತ್ಮಕ ವಿನ್ಯಾಸದ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾಬ್ದಾರಿಯನ್ನು ಹೊಂದಿರುವುದಿಲ್ಲ. ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣಕ್ಕೆ ಕಾರ್ಮಿಕರು ಹಾಗೂ ನಿರ್ಮಾಣದ ಬಗ್ಗೆ ಎಲ್ಲಾ ಸೂಕ್ತ ಕ್ರಮಗಳನ್ನು ಅಳವಡಿಸಿಕೊಳ್ಳತಕ್ಕದ್ದು. ನಿರ್ಮಾಣ ಸಮಯದಲ್ಲಿ ಯಾವುದೇ ತರಹದ ಅನಾಹುತ ಅಥವಾ ಪ್ರಾಣ ಹಾನಿಯಾಗದಂತೆ ಕಟ್ಟುನಿಟ್ಟಿನ ಎಚ್ಚರವಹಿಸತಕ್ಕದ್ದು. ಯಾವುದೇ ತರಹದ ಅನಾಹುತಕ್ಕೆ ಗುತ್ತಿಗೆ ಪಡೆದ ನಿರ್ಮಾಣದಾರರು ನೇರ ಜವಾಬ್ದಾರರಾಗಿರುತ್ತಾರೆ. ಅಂತಹ ಪ್ರಸಂಗ ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸುವುದಲ್ಲದೆ ನೀಡಲಾಗಿರುವ ಮಂಜೂರಾತಿಯು ತಂತಾನೆ ರದ್ದಾಗುತ್ತದೆ.
12) ಅಭಿವೃದ್ಧಿದಾರರು ಕಟ್ಟಡ ನಿರ್ಮಾಣ ಸಮಯದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳಿಂದಾಗಲೀ ಅಥವಾ ಇನ್ನಾವುದೇ ಕಟ್ಟಡದ ಅನುಪಯುಕ್ತ ಸಾಮಗ್ರಿಗಳಿಂದ ಸಾರ್ವಜನಿಕರಿಗೆ ಹಾಗೂ ಪರಿಸರಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು. ಇದಕ್ಕೆ ಅನುಗುಣವಾಗಿ ಬ್ಯಾರಿಕೇಡಿಂಗ್ ಅನ್ನು ಅಳವಡಿಸಿ ನಿರ್ಮಾಣ ಕಾರ್ಯ ಕೈಗೊಳ್ಳತಕ್ಕದ್ದು.
13) ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.
14) ಕಟ್ಟಡದ ಕಾಮಗಾರಿ ಆರಂಭಿಸುವ ಮುನ್ನ ಅರ್ಜಿದಾರರು ಲೈಸನ್ಸ್ ಅನ್ನು ಸ್ಥಳೀಯ ಸಂಸ್ಥೆಯಿಂದ ಪಡೆಯತಕ್ಕದ್ದು.
15) ಕಟ್ಟಡ ನಿರ್ಮಾಣ ಸಮಯದಲ್ಲಿ ಸೆಂಟರಿಂಗ್ ಅಥವಾ ಇನ್ನಿತರೇ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದ್ದಲ್ಲಿ ಅದಕ್ಕೆ ಅಭಿವೃದ್ಧಿದಾರರೇ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರು ಮಾಡಿದ ಯಾವುದೇ ಇಲಾಖೆ / ಸಂಸ್ಥೆಯು ಜವಾಬ್ದಾರರಾಗಿರುವುದಿಲ್ಲ.
16) ಅಭಿವೃದ್ಧಿದಾರರ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಯಾವುದೇ ನ್ಯಾಯಾಲಯದಿಂದ ನಿರ್ದೇಶನ ಬಂದಲ್ಲಿ ಹಾಗೂ ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ. ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕೈಗೊಳ್ಳಲಾಗುವುದು.
17) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಬಿ.ಡಬ್ಲ್ಯೂ. ಎಸ್.ಎಸ್.ಬಿ ಯನ್ನು [illegible]
18) [illegible] ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಇಲ್ಲವಾದಲ್ಲಿ ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗುವುದಿಲ್ಲ ಹಾಗೂ ನೀಡಲಾಗಿರುವ ನಕ್ಷೆ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆಯಿಲ್ಲದೆ ರದ್ದುಪಡಿಸಲಾಗುವುದು.
19) ಕಟ್ಟಡ ನಿರ್ಮಾಣ ಸಮಯದಲ್ಲಿ ಸುತ್ತಮುತ್ತಲಿನ ಪ್ರದೇಶಕ್ಕೆ ಅನಗತ್ಯ ಶಬ್ದ ಮಾಲಿನ್ಯ ತಡೆಗಟ್ಟುವ ಸಂಬಂಧ, ನಿರ್ಮಾಣದ ಹೊರಭಾಗಗಳಿಗೆ ಅಗತ್ಯ ರಕ್ಷಣಾ ಕವಚವನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರ ಸಲಹೆಯಂತೆ ಕಡ್ಡಾಯವಾಗಿ ಅಳವಡಿಸತಕ್ಕದ್ದು.
20) ಅಭಿವೃದ್ಧಿದಾರರು ವಾಹನ ನಿಲುಗಡೆಯ ಸ್ಥಳದಲ್ಲಿ ಕಡ್ಡಾಯವಾಗಿ ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು
21) ಅಭಿವೃದ್ಧಿದಾರರು ಸಿಟಿ ಮಾಸ್ಟರ್ ಪ್ಲಾನ್ ಗಳಲ್ಲಿ ವಿದ್ಯುತ್ ವಾಹನಗಳ ಚಾರ್ಜಿಂಗ್ ಗಳಿಗೆ ಸೂಕ್ತವಾದ ಮೀಸಲು ಸ್ಥಳಗಳನ್ನು ಕಾಯ್ದಿರಿಸತಕ್ಕದ್ದು
22) ಇತ್ತೀಚಿನ ಸರ್ಕಾರಿ ಆದೇಶ ಸಂಖ್ಯೆ ನಅಇ/536/ಬೆಂಭೂಸ್ವಾ/2017 ದಿನಾಂಕ: 16.03.2019ರ ಅನ್ವಯ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಪೀಲು ಸಂಖ್ಯೆ 5016/2016ರ ಷರತ್ತಿಗೊಳಪಟ್ಟಿರುತ್ತದೆ.

ನಮ/ಅಸ/ಅಠಿ- 2 /ತಾಸ- 3 /ಲಿ /14 /2019 2020
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ನಕ್ಷೆಗೆ
ನೀಡಿರುವ ಮಂಜೂರಾತಿಯು ಎರಡು ವರ್ಷಗಳ ಅವಧಿಗೆ
(ದಿನಾಂಕ: 10/12/2019 ರಿಂದ 09/12/2021 ರವರೆಗೆ)
ಮಾತ್ರ ಮಾನ್ಯತೆ ಪಡೆದಿರುತ್ತದೆ.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು
10/12

ದಿನಾಂಕ: 10/12/2019

PROJECT TITLE :-

PROPOSED RESIDENTIAL APARTMENT BUILDING
AT SY.NO: 07 (P), SHAMARAJAPURA VILLAGE,
YELAKANKA HOBLI, BANGALORE NORTH TALUK.

OWNER'S SIGNATURE :-

For SREE DURGA BUILDERS & DEVELOPERS
Partner Partner

FOR SREE DURGA BUILDERS & DEVELOPERS

ENGINEER'S SIGNATURE :-

RAMESH. S. B.E (Civil)
B.C.C/BL-3.6/E-4350/2018-19

ORIANTATION	SCALE
N	SCALE=1:100

DRAWING TITLE :-

TYPICAL 1ST, 2ND, 3RD & 4TH FLOOR PLAN
& TERRACE FLOOR PLAN

DRAWING SHEET NO-04 OF 05